# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1129

ಸದಸ್ಯರ ಹೆಸರು : ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 15-12-2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮೀಣ ಚುನಾಯಿತ ಸದಸ್ಯರುಗಳಿಗೆ ತಮ್ಮ ಗ್ರಾಮಗಳ ಅಭಿವೃದ್ಧಿ ಕಾರ್ಯಗಳಿಗಾಗಿ ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲೆಯ ಇತರ ಕಚೇರಿಗಳಿಗೆ ಭೇಟಿ ನೀಡಬೇಕಾಗಿದ್ದು, ಆ ಕಾರಣ ಸದರಿ ಚುನಾಯಿತ ಪ್ರತಿನಿಧಿಗಳಿಗೆ ತಮ್ಮ ಗ್ರಾಮ ಪಂಚಾಯತ್ ಕೇಂದ್ರ ಸ್ಥಾನದಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣ ಮಾಡಲು ಉಚಿತ ಬಸ್ ಪಾಸ್ ವಿತರಿಸುವಂತೆ ಗ್ರಾಮ ಪಂಚಾಯತ್ ಸದಸ್ಯರು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಭರಿಸುತ್ತಿರುವ ಪ್ರಯಾಣ ವೆಚ್ಚ ಹಾಗೂ ದಿನ ಭತ್ಯೆಗಳನ್ನು ಗ್ರಾಮ ಪಂಚಾಯತಿಗಳಿಂದ "ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994"ರನ್ವಯ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br><br>ಈ ಹಿನ್ನೆಲೆಯಲ್ಲಿ ಉಚಿತ ಬಸ್ ಪಾಸ್ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಆ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | |

ಸಂಖ್ಯೆ: ಗ್ರಾಅಪಂರಾ 376 ಜಿಪಸ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು